# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ 424/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 09/12/2020

**ವಿಷಯ:-** ದಿನಾಂಕ. 07.12.2020ರಂದು ನಡೆದ ವಾರ್ಡ್ ಸಂಖ್ಯೆ. 120ರ ಸಮಿತಿ ಸಭೆಯ ನಡವಳಿಗಳು

**ಉಲ್ಲೇಖ:-** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21, ದಿ.21.09.2020

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮುನಿಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.
2. ಕೆ.ಪಿ ಅಗ್ರಹಾರ 2ನೇ ಮುಖ್ಯರಸ್ತೆಯಲ್ಲಿ ಇತ್ತೀಚೆಗೆ ಬಿದ್ದ ಮಳೆಯಿಂದ ರಾಜ ಕಾಲುವೆಯಿಂದ ನೀರು ಹೊರಬರುತ್ತಿರುವುದರ ಬಗ್ಗೆ ಅಲ್ಲಿನ ಸ್ಥಳೀಯರು ತಿಳಿಸಿದ್ದಾರೆ. ಹಾಗಾಗಿ ಸದರಿ ಕಾಮಗಾರಿಯನ್ನು ಸರಿಪಡಿಸಲು ವಾರ್ಡ್ ಅಧಿಕಾರಿಗಳಿಗೆ ಸೂಚಿಸಲಾಯಿತು.
3. ಕಾಟನ್‌ಪೇಟೆಯ ಮಿಲ್ ರಸ್ತೆಯಲ್ಲಿ ಮಳೆ ಬಂದಾಗ ನೀರು ನಿಂತು ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟಾಗಿದೆ. ಹಾಗಾಗಿ ಸದರಿ ಕಾಮಗಾರಿಯನ್ನು ನಿರ್ವಹಿಸಲು ವಾರ್ಡ್‌ನ ಅಧಿಕಾರಿಗಳಿಗೆ ಸೂಚಿಸಲಾಯಿತು.
4. ಕೆ.ಪಿ ಅಗ್ರಹಾರದ ನೇತಾಜಿನಗರದ 8ನೇ ರಸ್ತೆ ಕುಸಿತಗೊಂಡಿದ್ದು, ಅದಕ್ಕೆ ಕೂಡಲೇ ಸೂಕ್ತ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.
5. ಮಾಗಡಿ ರಸ್ತೆಯ 1ನೇ ಮೈನ್ ರಸ್ತೆಯ ಬದಿಯಲ್ಲಿ ಬಿದ್ದಿರುವ ಕಸವನ್ನು ಶೀಘ್ರವೇ ವಿಲೇವಾರಿ ಮಾಡಲು ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಯಿತು.
6. ಕೆ.ಪಿ ಅಗ್ರಹಾರದ, ನಾಗಮ್ಮನಗರದ ರಸ್ತೆಯಲ್ಲಿ ಮ್ಯಾನ್ ಹೋಲ್‌ನ ರಿಂಗ್ ಒಡೆದು ಸಾರ್ವಜನಿಕರು ಹಾಗೂ ವಾಹನಗಳ ಓಡಾಟಕ್ಕೆ ತೊಂದರೆಯಾಗಿದ್ದು, ಸದರಿ ಕಾಮಗಾರಿಯನ್ನು ಶೀಘ್ರವೇ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.
7. ಸುಲ್ತಾನ್‌ಪೇಟೆಯ ವಾರ್ಡ್ ಆಫೀಸ್ ಹತ್ತಿರ ಬಿದ್ದಿರುವ ಡೆಬ್ರೀಸ್‌ನ್ನು ಶೀಘ್ರವೇ ವಿಲೇವಾರಿ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಯಿತು.
8. ಸುಲ್ತಾನ್‌ಪೇಟೆ ಮುಖ್ಯರಸ್ತೆ ಹಾಗೂ ಪೋಲೀಸ್ ರಸ್ತೆಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಸ್ಥೆಯವರು ಪೈಪ್‌ಗಳನ್ನು ಹಾಕುವ ಕಾಮಗಾರಿ ನಡೆಸಲು ರಸ್ತೆಗಳನ್ನು ಅಗೆದಿರುವುದರಿಂದ ರಸ್ತೆಗಳು ದುರಸ್ಥಿಗೊಂಡಿವೆ. ಸದರಿ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಿ ದುರಸ್ಥಿಗೊಂಡ ರಸ್ತೆಗಳನ್ನು ಸರಿಪಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.

Scanned with CamScanner

9. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನಿರ್ಣಯ:-

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತ್ತು.

ಕಾರ್ಯದರ್ಶಿ
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು :

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾಟನ್‌ಪೇಟೆ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.

Scanned with CamScanner